ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೩

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನ)
## ಸೋಮವಾರ, ದಿನಾಂಕ: ೦೪ನೇ ಜುಲೈ, ೨೦೧೬

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು
೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು
೫. ವೈದ್ಯಕೀಯ ಶಿಕ್ಷಣ ಸಚಿವರು
೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು
೭. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹುದ್ದೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೧ (೧೬೨೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು ; ಅವುಗಳಲ್ಲಿ ಭರ್ತಿಯಾಗಿರುವ ಹುದ್ದೆಗಳೆಷ್ಟು ;

(ಆ) ಚಿಕ್ಕಮಗಳೂರು ಜಿಲ್ಲೆಯ ಬಹುತೇಕ ತಾಲ್ಲೂಕುಗಳಲ್ಲಿ ಹಲವು ತಿಂಗಳುಗಳಿಂದ ಸಿ.ಡಿ.ಪಿ.ಓ. ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಹುದ್ದೆಯಲ್ಲಿ ಪ್ರಸ್ತುತ ಯಾರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಹೆಚ್ಚುತ್ತಿರುವ ಸಾಂಕ್ರಾಮಿಕ ರೋಗಗಳ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) +**

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೮೨ (೧೫೪೫+೧೬೧೪+೧೫೯೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಡೆಂಗ್ಯೂ, ಮಲೇರಿಯಾ ಹಾಗೂ ಚಿಕುನ್‌ಗುನ್ಯಾ ಸಾಂಕ್ರಾಮಿಕ ರೋಗಗಳು ವ್ಯಾಪಕವಾಗಿ ಹಬ್ಬುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ರಾಜ್ಯದ ಇತರೆ ಜಿಲ್ಲೆಗಳಲ್ಲಿ ದೃಢಪಟ್ಟಿರುವ ಪ್ರಕರಣಗಳು ಎಷ್ಟು ; ಮೃತಪಟ್ಟವರ ಸಂಖ್ಯೆ ಎಷ್ಟು ; (ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ಪ್ರತ್ಯೇಕ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಈ ಮಹಾಮಾರಿ ಕಾಯಿಲೆಗಳಿಗೆ ಬಲಿಯಾಗಿರುವವರ ಸಂಖ್ಯೆ ಎಷ್ಟು ; ಅವರ ಕುಟುಂಬಗಳಿಗೆ ನೀಡಿರುವ ಪರಿಹಾರವೇನು ;

(ಇ) ಈ ರೋಗಗಳು ಹೆಚ್ಚಿನ ಸಂಖ್ಯೆಯಲ್ಲಿ ಹರಡದಿರಲು ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; ಹಾಗೂ ರೋಗ ನಿಯಂತ್ರಣಕ್ಕಾಗಿ ಸರ್ಕಾರ ವೆಚ್ಚ ಮಾಡಿರುವ ಹಣ ಎಷ್ಟು ;

(ಈ) ಡೆಂಗ್ಯೂ, ಮಲೇರಿಯಾ ಚಿಕುನ್‌ಗುನ್ಯಾ ಕಾಯಿಲೆಯನ್ನು ಪತ್ತೆ ಮಾಡುವ ಕೆಲ ಖಾಸಗಿ ಆಸ್ಪತ್ರೆ ಮತ್ತು ಲ್ಯಾಬ್‌ಗಳು ಬಡ ರೋಗಿಗಳನ್ನು ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಈ ರೋಗಗಳಿಂದ ಬಳಲುತ್ತಿರುವ ರೋಗಿಗಳಿಗೆ ಅವಶ್ಯವಿರುವ ಔಷಧಿ ಹಾಗೂ ಇತರೆ ಸೌಲಭ್ಯಗಳನ್ನು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೧೮೩ (೧೫೨೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಹೊಸ ಹೊಸ ಕಾರ್ಯಕ್ರಮ / ಯೋಜನೆಗಳು ಯಾವುವು; ಕಾಯ್ದಿರಿಸಿದ ಅನುದಾನ ಎಷ್ಟು ;

(ಆ) ವಿವಿಧ ಯೋಜನೆಗಳ ಆಯ್ಕೆ ಪ್ರಕ್ರಿಯೆಗೆ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ;

(ಇ) ಫಲಾನುಭವಿ ಆಯ್ಕೆಯಲ್ಲಿ ಪಾರದರ್ಶಕತೆ ತರುವುದು ಸೇರಿದಂತೆ, ಸಮಾಜದ ಕಟ್ಟಕಡೆಯ ಅರ್ಹ ಫಲಾನುಭವಿಗೆ ಯೋಜನೆಯ ಪ್ರಯೋಜನ ತಲುಪಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕಳೆದ ೩ ವರ್ಷಗಳಲ್ಲಿ ಕೆ.ಎ.ಎಸ್./ಐ.ಎ.ಎಸ್./ಬ್ಯಾಂಕಿಂಗ್ ತರಬೇತಿಗಾಗಿ ಖರ್ಚಾದ ಅನುದಾನ ಎಷ್ಟು ; ತರಬೇತಿ ಪಡೆದ ಒಟ್ಟು ಅಭ್ಯರ್ಥಿಗಳ ಸಂಖ್ಯೆ ಎಷ್ಟು ; ತರಬೇತಿ ಪಡೆದು ಉದ್ಯೋಗ ಪಡೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)** –

೧೮೪ (೧೭೨೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಅನುಸೂಚಿತ ಜಾತಿ / ಅನುಸೂಚಿತ ಪಂಗಡಗಳ ಹೆಣ್ಣುಮಕ್ಕಳ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಅವುಗಳ ಪೈಕಿ ಎಷ್ಟು ವಸತಿ ಶಾಲೆಗಳಲ್ಲಿ ಮಹಿಳಾ ವಾರ್ಡ್‌ನ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಅಲ್ಲಿನ ವಿದ್ಯಾರ್ಥಿಗಳಿಗೆ ಆರೋಗ್ಯ ದೃಷ್ಟಿಯಿಂದ ಹಾಗೂ ಭದ್ರತಾ ವಿಷಯದಲ್ಲಿ ಕೈಗೊಂಡಿರುವ ಕ್ರಮಗಳಾವುವು ;

(ಈ) ಸದರಿ ಹಾಸ್ಟೆಲ್‌ಗಳಲ್ಲಿ ಪೀಠೋಪಕರಣ, ಪಾಠೋಪಕರಣಗಳು ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೧೮೫ (೧೬೨೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನೇಕ ಆಸ್ಪತ್ರೆಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಟಾಯ್ಲೆಟ್‌ಗಳ ಸೌಲಭ್ಯಗಳಿಲ್ಲದಿರುವುದರಿಂದ ಕೂಡಲೇ ಈ ವ್ಯವಸ್ಥೆ ಮಾಡಲು ಸರ್ಕಾರವು ಗಂಭೀರ ಚಿಂತನೆ ನಡೆಸುತ್ತದೆಯೇ ;

(ಇ) ಆಸ್ಪತ್ರೆಗಳಲ್ಲಿ ವೈದ್ಯರಿಗೆ ಮತ್ತು ಸಿಬ್ಬಂದಿವರ್ಗದವರಿಗೆ ಹಣ ನೀಡದಿದ್ದರೆ ವೈದ್ಯಕೀಯ ಸೌಲಭ್ಯ ಸಿಗುವುದಿಲ್ಲ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದನ್ನು ನಿವಾರಣೆ ಮಾಡಲು ಸರ್ಕಾರ ಪ್ರಯತ್ನಿಸುತ್ತದೆಯೇ ?

## ಅಲೆಮಾರಿ / ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ನಿಗಮ ಸ್ಥಾಪಿಸುವ ಕುರಿತು

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೧೮೬ (೧೫೭೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯಾದಾದ್ಯಂತ ಇರುವ ಅಲೆಮಾರಿ / ಅರೆ ಅಲೆಮಾರಿ ಜನಾಂಗದ ಜನಸಂಖ್ಯೆ ಎಷ್ಟು ;

(ಆ) ಯಾವ ಯಾವ ಜಿಲ್ಲೆಯಲ್ಲಿ ಎಷ್ಟೆಷ್ಟು ಜನಸಂಖ್ಯೆ ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಲೆಮಾರಿ / ಅರೆ ಅಲೆಮಾರಿ ಜನಾಂಗದ ಸಮಗ್ರ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ಹಾಗಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೮೭ (೧೫೧೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳಿಗೆ ಸರ್ಕಾರ ಜಾರಿ ಮಾಡಿರುವ ಯೋಜನೆಗಳು ಯಾವುವು ; ಆ ಯೋಜನೆಗಳಿಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣವೆಷ್ಟು ; ಭೌತಿಕ ಖರ್ಚು ಮಾಡಿರುವ ಹಣ ಎಷ್ಟು ; (೩ ವರ್ಷಗಳ ವರ್ಷಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

## ಬಳ್ಳಾರಿಯ ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿನ ಹಗರಣಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೮೮ (೧೬೨೫) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿಯ ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಕಳೆದ ೨೦೧೨–೧೩ನೇ ಸಾಲಿನಿಂದ ಆದಂತಹ ಹಗರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸಂಪೂರ್ಣ ವಿವರ ನೀಡುವುದು ;

(ಆ) ಈ ಹಗರಣಗಳಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಆದಂತಹ ನಷ್ಟ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಇ) ಈ ಹಗರಣಗಳಲ್ಲಿ ಭಾಗಿಯಾದಂತಹ ಅಧಿಕಾರಿಗಳು ಯಾರು ; ಅವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಮೀನುಗಾರರಿಗೆ ಡೀಸೆಲ್ ಮತ್ತು ಸೀಮೆಎಣ್ಣೆ ಸಬ್ಸಿಡಿಗಾಗಿ ಸರ್ಕಾರ ನೀಡುವ ಸಹಾಯಧನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)** –

೧೮೯ (೧೫೬೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮೀನುಗಾರರಿಗೆ ಡೀಸೆಲ್ ಮತ್ತು ಸೀಮೆಎಣ್ಣೆ ಸಬ್ಸಿಡಿಗಾಗಿ ಸರ್ಕಾರ ನೀಡುವ ಸಹಾಯಧನ ಎಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಾಡದೋಣಿ ಮೀನುಗಾರರಿಗೆ ತಿಂಗಳೊಂದಕ್ಕೆ ಪರ್ಮಿಟ್‌ನಿಂದ ನೀಡುವ ಸೀಮೆಎಣ್ಣೆ ಎಷ್ಟು ; ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪರ್ಮಿಟ್‌ದಾರರಿದ್ದಾರೆ ;

(ಇ) ರಾಜ್ಯದಲ್ಲಿರುವ ಒಟ್ಟು ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು ; ೨೦೧೪–೧೫ ಮತ್ತು ೨೦೧೫–೧೬ ರಲ್ಲಿ ಒಟ್ಟು ಎಷ್ಟು ಫಲಾನುಭವಿಗಳಿಗೆ ಡೀಸೆಲ್, ಸೀಮೆಎಣ್ಣೆ ಮತ್ತು ಸಬ್ಸಿಡಿಯನ್ನು ಅವರ ಬ್ಯಾಂಕ್‌ಗಳಿಗೆ ಪಾವತಿಸಲಾಗಿದೆ; ಫಲಾನುಭವಿಗಳ ಆಯ್ಕೆಗಾಗಿ ಯಾವ ಮಾನದಂಡ ಅನುಸರಿಸಲಾಗುತ್ತದೆ ? (ವಿವರ ನೀಡುವುದು)

## ಮಹಿಳೆಯರ ಗರ್ಭಾಶಯ ದಂಧೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)** –

೧೯೦ (೧೬೨೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಗೊಲ್ಲರ ಹಟ್ಟಿಗಳಲ್ಲಿ ವಾಸ ಮಾಡುತ್ತಿರುವ ಕೆಲವು ಹೆಣ್ಣುಮಕ್ಕಳು ಸಾಮಾಜಿಕ ಅನಿಷ್ಠ ಪದ್ಧತಿಗಳಿಂದ ತಮ್ಮ ಗರ್ಭಾಶಯಗಳನ್ನು ತೆಗೆಸಿಕೊಳ್ಳುವುದು; ಇನ್ನು ಕೆಲವು ಕಡೆ ಮಹಿಳೆಯರಲ್ಲಿ ಮೌಢ್ಯ ಮತ್ತು

ಮೂಢನಂಬಿಕೆಗಳ ಪದ್ಧತಿಗಳನ್ನು ಭಿತ್ತಿ ಹಣ ಮಾಡುವ ಸಲುವಾಗಿ ಮಹಿಳೆಯರ ಗರ್ಭಗಳನ್ನು ತೆಗೆದಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಸನ ಜಿಲ್ಲೆ, ಬೀರೂರು ತಾಲ್ಲೂಕಿನ ಆಸ್ಪತ್ರೆಯಲ್ಲಿ ವೈದ್ಯರೊಬ್ಬರು ಮೇಲಿನ ಕಾರಣಗಳಿಂದ ಮಹಿಳೆಯರ ಗರ್ಭಕೋಶ ತೆಗೆದಿರುವ ಪ್ರಕರಣ ಬೆಳಕಿಗೆ ಬಂದಿದ್ದು ಈ ಸಂಬಂಧ ಸರ್ಕಾರ ಶ್ಯಾಮಲ ಭಂಡಾರಿ ಮತ್ತಿತರರನ್ನು ಒಳಗೊಂಡ ಸಮಿತಿಯನ್ನು ರಚನೆ ಮಾಡಿರುವುದು ನಿಜವೇ ;

(ಇ) ಈ ಸಮಿತಿ ಸಮಗ್ರ ತನಿಖೆ ನಡೆಸಿ, ರಾಜ್ಯಾದಾದ್ಯಂತ ಈ ದಂಧೆ ಇರುವ ಸಾಧ್ಯತೆ ಇದೆ ಆ ಕಾರಣಕ್ಕೆ ಸಿ.ಐ.ಡಿ. ತನಿಖೆಗೆ ಒಳಪಡಿಸಬೇಕೆಂದು ಸರ್ಕಾರಕ್ಕೆ ವರದಿ ನೀಡಿದೆಯೇ ;

(ಈ) ನೀಡಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; ಕೈಗೊಳ್ಳದಿದ್ದಲ್ಲಿ ಅದಕ್ಕೆ ಕಾರಣಗಳೇನು ?

## ತುರುವೇಕೆರೆ ತಾಲ್ಲೂಕು ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** (**ನಾಮನಿರ್ದೇಶನ ಹೊಂದಿದವರು**) – ೧೯೧ (೧೩೪೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಆರೋಗ್ಯ ಉಪಕೇಂದ್ರಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ತಾಲ್ಲೂಕಿನಾದ್ಯಂತ ಆರೋಗ್ಯ ಉಪ ಕೇಂದ್ರಗಳನ್ನು ತೆರೆಯಲು ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳಾವುವು ;

(ಇ) ಮಾಯಸಂದ್ರ ಹೋಬಳಿಯ ಮಣೆ ಬೆಂಡೂರು ಗ್ರಾಮದಲ್ಲಿ ಹೊಸದಾಗಿ ಆರೋಗ್ಯ ಉಪ ಕೇಂದ್ರ ತೆರೆಯಲು ಸರ್ಕಾರವು ಕ್ರಮ ಕೈಗೊಳ್ಳಲಾಗುವುದೇ ;

(ಈ) ಮಾಯಸಂದ್ರ ಹೋಬಳಿಯ ಶೆಟ್ಟಿಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಯಾವುವು ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; ಸದರಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಉ) ಸಿಬ್ಬಂದಿಗಳ ವಾಸಕ್ಕೆ ವಸತಿಗೃಹದ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಈ ವರ್ಷದಲ್ಲೇ ಕಟ್ಟಡ ಒದಗಿಸಲಾಗುವುದೇ ?

**ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಶಿಕ್ಷಣ ಕೋರ್ಸ್‌ಗಳ ಪ್ರವೇಶ ಶುಲ್ಕ ಕುರಿತು**

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೯೨ (೧೫೯೯) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೦೬–೨೦೦೭ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಶಿಕ್ಷಣ ಕೋರ್ಸುಗಳ ಪ್ರವೇಶಕ್ಕೆ ಶುಲ್ಕಗಳನ್ನು ನಿಗಧಿಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವಿಧ ಕೋರ್ಸುಗಳಿಗೆ ನಿಗಧಿಪಡಿಸಿದ ಶುಲ್ಕಗಳೇನು ಹಾಗೂ ಕಳೆದ ಶೈಕ್ಷಣಿಕ ವರ್ಷದ ಮತ್ತು ಈ ವರ್ಷದ ಶುಲ್ಕದಲ್ಲಿ ಆದ ವ್ಯತ್ಯಾಸದ ವಿವರ ನೀಡುವುದು ;

(ಆ) ಅಲ್ಪಸಂಖ್ಯಾತ ಹಾಗೂ ಡೀಮ್ಡ್ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾದ ಶುಲ್ಕವನ್ನು ನಿಗಧಿ ಪಡಿಸಲಾಗಿದೆಯೇ ಹಾಗಿದ್ದಲ್ಲಿ, ಕಳೆದ ವರ್ಷಕ್ಕೂ ಮತ್ತು ಈ ವರ್ಷದ ಶುಲ್ಕದಲ್ಲಾಗಿರುವ ವ್ಯತ್ಯಾಸದ ವಿವರ ನೀಡುವುದು ?

**ಆರ್ಯ ವೈಶ್ಯ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸುವ ಬಗ್ಗೆ**

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೩ (೧೬೨೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಒಟ್ಟು ಹಿಂದುಳಿದ ವರ್ಗಗಳ ಸಂಖ್ಯೆ ಎಷ್ಟು ; ಈ ವ್ಯಾಪ್ತಿಯಲ್ಲಿ ಯಾವ ಯಾವ ವರ್ಗಗಳು ಬರುತ್ತವೆ ;

(ಆ) ಆರ್ಯ ವೈಶ್ಯ ಸಮಾಜದಲ್ಲಿ ಶ್ರೀಮಂತರಿಗಿಂತ ತುಂಬಾ ಕಡು ಬಡವರು ಹೆಚ್ಚಿದ್ದು, ಸದರಿ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸಬೇಕೆಂದು ಈ ಹಿಂದೆ ಸರ್ಕಾರವನ್ನು ಒತ್ತಾಯ ಮಾಡಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಈ ವರ್ಗವನ್ನು ಹಿಂದುಳಿದ ವರ್ಗಗಳ ಗುಂಪಿಗೆ ಸೇರಿಸಲು ಸರ್ಕಾರ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೪ (೧೫೨೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮೆಟ್ರಿಕ್ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರಿ ಕಟ್ಟಡದಲ್ಲಿ ಹಾಗೂ ಖಾಸಗಿ ಕಟ್ಟಡಗಳಲ್ಲಿ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ;

(ಇ) ಈ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಡಯಾಲಿಸಿಸ್ ಸೌಲಭ್ಯ ಹೊಂದಿರುವ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೫ (೧೫೧೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಡಯಾಲಿಸಿಸ್ ಸೌಲಭ್ಯವನ್ನು ಹೊಂದಿರುವ ಜಿಲ್ಲಾ ಮತ್ತು ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಅವು ಯಾವುವು) (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಡಯಾಲಿಸಿಸ್ ಸೌಲಭ್ಯವನ್ನು ಹೊಂದಿರುವ ಜಿಲ್ಲಾ ಮತ್ತು ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಇವುಗಳನ್ನು ನಿರ್ವಹಿಸುವ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕೊರತೆ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಪ್ರಯೋಗಾಲಯಗಳಲ್ಲಿ ರಕ್ತ ಪರೀಕ್ಷೆಗೆ ಅಗತ್ಯವಾದಂತೆ ಪ್ರಯೋಗಾಲಯ ನಿರ್ವಹಣಾ ಸಿಬ್ಬಂದಿಗಳ (Lab Technician) ಹುದ್ದೆ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಡೆಂಗ್ಯೂ, ಮಲೇರಿಯಾದಂತಹ ಜ್ವರದ ಪರೀಕ್ಷೆಗೆ ಸಾರ್ವಜನಿಕರು ಖಾಸಗಿ ಪ್ರಯೋಗಾಲಯದಲ್ಲಿ ಅಧಿಕ ವೆಚ್ಚ ಮಾಡಿ ಪರೀಕ್ಷಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಗಮನಿಸಿದ್ದಲ್ಲಿ, ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಇಲ್ಲವಾದಲ್ಲಿ, ಕಾರಣವೇನು)

**ಶ್ರೀನಿವಾಸ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 249, ಪ್ರತಿಗಳು 1500